# ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 284 / 2011

ಪಿರ್ಯಾದುದಾರರು ಃ ಕುದೂರು ಪೋಲಿಸರು ಠಾಣೆ

**ವಿರುದ್ಧ**

**ಆರೋಪಿ ಃ ಮಂಜುನಾಥ ಅಲಿಯಾಸ್ ವಿನೋದ**

**CW-17 PW-02**

**ಉದ್ಘೋಷಣೆ ಮತ್ತು ಜಪ್ತಿ ಆದೇಶ ಜಾರಿಗೊಳಿಸಿದ ಅಧಿಕಾರಿ**

| | |
|---|---|
| ಹೆಸರು | **ಸಿ.ಆರ್ ರಂಗನಾಥ** |
| ತಂದೆಯ / ಗಂಡನ ಹೆಸರು | **ರಂಗಪ್ಪ** |
| ವಯಸ್ಸು | **69** |
| ಉದ್ಯೋಗ | **ನಿವೃತ್ತ ಪಿ.ಐ.** |
| ವಿಳಾಸ | **ಬೆಂಗಳೂರು** |

**ದಿನಾಂಕಃ 17-09-2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಆರೋಪಿ ತಲೆ ಮರೆಸಿಕೊಂಡಿರುವ ಕಾರಣ ಸಾಕ್ಷಿಯ ವಿಚಾರಣೆಯನ್ನು 299 ಸಿ.ಆರ್.ಪಿ.ಸಿ . ಅಡಿಯಲ್ಲಿ ತೆಗೆದುಕೊಳ್ಳಲಾಯಿತು ಃ-**

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ನಾನು ದಿಃ 19-01-2005 ರಿಂದ ದಿಃ 29-06-2005 ರವರೆಗೆ ಕುದೂರು ಪೋಲಿಸು ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ಹಿಂದೆ ಇದ್ದ ಅಧಿಕಾರಿಗಳು ಮಾಡಿದ ತನಿಖೆಯಿಂದ ಆರೋಪಿತರು ಮಾಡಿದ ಆರೋಪ ಸಾಬೀತಾದ ಕಾರಣ ಮಾನ್ಯ ನ್ಯಾಯಾಲಯಕ್ಕೆ ದೋಷರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಮರು ವಿಚಾರಣೆ ಃ- ಇರುವುದಿಲ್ಲ.**

ಓ. ಹೇ. ಕೇ. ಸ. ಇ. ಎ.  ಓಪ್ಪಿರುತ್ತಾರೆ,

ಅ. ನ್ಯಾ . ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.

CC NO. 284/2011
PW-1

**ದಿನಾಂಕಃ 17-09-2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ**

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ದೂರು ಆಗಿದ್ದು, ದೃಢೀಕೃತ ಪ್ರತಿಯಾದ ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಏನು ಬರೆದಿರುತ್ತದೆಂದು ನನಗೆ ಗೊತ್ತಿರುವುದಿಲ್ಲ. ನಿಪಿ-1 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ. ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲಾತಿ ಸ್ಥಳ ಮಹಜರ್ ಆಗಿದ್ದು, ದೃಢೀಕೃತ ಪ್ರತಿಯಾದ ಸ್ಥಳ ಮಹಜರ್ ನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಏನು ಬರೆದಿರುತ್ತದೆಂದು ನನಗೆ ಗೊತ್ತಿರುವುದಿಲ್ಲ. ನಿಪಿ-2 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಅ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**